**ದಿನಾಂಕ: 07.01.2022 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಡಿ.ಸುಂದರಯ್ಯ– ವಾರ್ಡ್ ಸಮಿತಿ ನೋಡಲ್ ಅಧಿಕಾರಿ
2. ಶ್ರೀ ವೆಂಕಟರಮಣ.ಕೆ.ವಿ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 184ಉತ್ತರಹಳ್ಳಿ)
3. ಶ್ರೀ ಅನಿಲ್ ಕುಮಾರ್ – ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,
4. ಶ್ರೀ ಸಂಕೇತ್ ಕುಮಾರ್ – ಮೇಲ್ವಿಚಾರಕರು, ಬೃಹತ್ ಮಳೆ ನೀರು ಗಾಲುವೆ
5. ಶ್ರೀಮತಿ ಚೇತನಾ ನಾಯ್ಕ್ – ಸಬ್ ಇನ್ಸ್‌ಪೆಕ್ಟರ್, ಟ್ರಾಫಿಕ್ ವಿಭಾಗ, ಕುಮಾರಸ್ವಾಮಿ ಬಡಾವಣೆ,
6. ಶ್ರೀ ವೆಂಕಟೇಶ್.ಕೆ – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
7. ಶ್ರೀ ಶಿವರಾಜು – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ

**ಹಾಜರಿದ್ದ ಸಮಿತಿ ಸದಸ್ಯರು:-**

1. ಶ್ರೀ ಎಸ್.ಕೆ.ಸುದೀಂದ್ರ – ಪೂರ್ಣಪ್ರಜ್ಞಾ ಬಡಾವಣೆ RWA
2. ಶ್ರೀ ಕೆ.ಶ್ರೀನಾಥ್ – ಪೂರ್ಣಪ್ರಜ್ಞಾ ಬಡಾವಣೆ RWA
3. ಶ್ರೀ ಅರುಣ್ – ಎ.ಜಿ.ಎಸ್ ಬಡಾವಣೆ RWA
4. ಶ್ರೀ ಅಮರ್.ಎಂ.ಆರ್ – ಎ.ಜಿ.ಎಸ್ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸೂಚಿಸಲಾಗಿರುತ್ತದೆ.

1. **ಬೆಂಗಳೂರು ನೀರು ಮತ್ತು ಒಳಚರಂಡಿ ಇಲಾಖೆಗೆ ಸಂಬಂಧಪಟ್ಟಂತೆ**
   - ಹೆಚ್.ಎಂ.ಎಸ್ ಬಡಾವಣೆಯಲ್ಲಿ ಕಾವೇರಿ ನೀರು ಸರಬರಾಜು ಮಾಡಲು 35 ಕಡತಗಳನ್ನು ಉಪವಿಭಾಗ ಕಛೇರಿಗೆ ಸಲ್ಲಿಸಿದ್ದು, ನೀರು ಸರಬರಾಜು ಮಾಡಲು ಎಸ್ಟಿಮೇಟ್ ಮೊತ್ತದ ದಾಖಲೆಗಳನ್ನು ಪ್ಲೋರ್‌ವೈಸ್ ನೀಡಲು ಕೋರಿರುತ್ತಾರೆ.

ಈ ಬಗ್ಗೆ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ಕುಡಿಯುವ ನೀರು ಮತ್ತು ಒಳಚರಂಡಿ ಮಂಡಳಿ ರವರಿಗೆ ಸೂಚಿಸಿರುತ್ತಾರೆ.

2. **ಟ್ರಾಫಿಕ್ ಪೋಲೀಸ್ ಠಾಣೆಗೆ ಸಂಬಂಧಪಟ್ಟಂತೆ**
   - ಬೃಂದಾವನ ಹೋಟೇಲ್ ಮುಖ್ಯರಸ್ತೆಯಲ್ಲಿ ಅತೀ ವಾಹನ ಸಂಚಾರ ಹೆಚ್ಚಾಗಿರುವುದರಿಂದ ನೋ ಪಾರ್ಕಿಂಗ್ ಜಾಗದಲ್ಲಿ ನಿಲುಗಡೆ ಮಾಡಿರುವ ವಾಹನವನ್ನು ಟ್ರಾಫಿಕ್ ಇಲಾಖೆಯಿಂದ ಟೋಯಿಂಗ್ ಮಾಡಿ ಪೋಲೀಸ್ ಠಾಣೆ ಹತ್ತಿರ ನಿಲುಗಡೆ ಮಾಡಲು ಕೋರಿರುತ್ತಾರೆ.

➢ ಉತ್ತರಹಳ್ಳಿ ಬಡಾವಣೆಯ ಸುತ್ತಮುತ್ತಲಿನ ಬಡಾವಣೆಯಲ್ಲಿ ಮನೆ ಕಳ್ಳತನ ಆಗುತ್ತಿದ್ದು, ಆರಕ್ಷಕ ಸಿಬ್ಬಂದಿಗಳನ್ನು ನಿಯೋಜಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಇನ್ಸ್‌ಪೆಕ್ಟರ್ ಕುಮಾರಸ್ವಾಮಿ ಬಡಾವಣೆ ಸಂಚಾರಿ ಪೊಲೀಸ್ ಠಾಣೆ ರವರಿಗೆ ಸೂಚಿಸಿರುತ್ತಾರೆ.

3. **ಕಾನೂನು ಮತ್ತು ಸುವ್ಯವಸ್ಥೆ ಪೋಲೀಸ್ ಠಾಣೆಗೆ ಸಂಬಂಧಪಟ್ಟಂತೆ**

➢ ಹೆಚ್.ಎಂ.ಎಸ್ ಬಡಾವಣೆಯ ಸುತ್ತಮುತ್ತಲಿನ ಬಡಾವಣೆಯಲ್ಲಿ ಮನೆ ಕಳ್ಳತನ ಆಗುತ್ತಿದ್ದು, ಆರಕ್ಷಕ ಸಿಬ್ಬಂದಿಗಳನ್ನು ನಿಯೋಜಿಸಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಇನ್ಸ್‌ಪೆಕ್ಟರ್ ಸುಬ್ರಮಣ್ಯಪುರ ಪೋಲೀಸ್ ಠಾಣೆ ರವರಿಗೆ ಸೂಚಿಸಿರುತ್ತಾರೆ.

4. **ಸ.ಕಾ.ನಿ.ಅ ಉತ್ತರಹಳ್ಳಿ ಉಪವಿಭಾಗಕ್ಕೆ ಸಂಬಂಧಪಟ್ಟಂತೆ**

➢ ಹೆಚ್.ಎಂ.ಎಸ್ 5ನೇ ಮುಖ್ಯರಸ್ತೆಯಲ್ಲಿ ಬೆಸ್ಕಾಂ ಇಲಾಖೆಯವರು ತೆರವುಗೊಳಿಸಿರುವ ಮೋರ್ ಸ್ಲ್ಯಾಬ್‌ಅನ್ನು ಪುನರ್ ಜೋಡಣೆ ಮಾಡಲು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಉತ್ತರಹಳ್ಳಿ ರವರಿಗೆ ಸೂಚಿಸಿರುತ್ತಾರೆ.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಅಂಜನಾಪುರ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ–184